ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಕೌಶಾಲ್ಯಾಭಿವೃದ್ಧಿ, ಉದ್ದಮಶೀಲತೆ ಮತ್ತು ಜೀವನೋಪಾಯ ಇಲಾಖೆ ಯೋಜನೆಗಳ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

24 (11) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೌಶಾಲ್ಯಾಭಿವೃದ್ಧಿ, ಉದ್ದಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಲು ರೂಪಿಸಿರುವ ಯೋಜನೆಗಳು ಯಾವುವು; ಈ ಯೋಜನೆಗಳ ಪ್ರಯೋಜನ ಪಡೆಯಲು ನಿಗದಿಪಡಿಸಿರುವ ಮಾನದಂಡಗಳೇನು; (ವಿವರ ನೀಡುವುದು)

(ಆ) ರಾಜ್ಯದ ಯಾವ ಯಾವ ಜಿಲ್ಲಾ ಕೇಂದ್ರಗಳಲ್ಲಿ ಕೌಶಲ್ಯಾಭಿವೃದ್ಧಿ ಕೇಂದ್ರಗಳನ್ನು ತೆರೆಯಲಾಗಿದೆ; ಈ ಕೇಂದ್ರಗಳ ಮುಖ್ಯ ಉದ್ದೇಶ ಮತ್ತು ಕಾರ್ಯ ಚಟುವಟಿಕೆ ವಿವರ ನೀಡುವುದು;

(ಇ) ಹಾಸನ ಜಿಲ್ಲೆಯಲ್ಲಿ ಕಳೆದ 5 ವರ್ಷಗಳಲ್ಲಿ ಸರ್ಕಾರ ಕೈಗೊಂಡಿರುವ ಕಾರ್ಯಚಟುವಟಿಕೆಗಳೇನು? (ಸಂಪೂರ್ಣ ವಿವರ ನೀಡುವುದು)